ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:  ದಿನಾಂಕ : DATE : 5/1/2021

# ಸಮಾಲೋಚನಾ ಸಭೆ

ಬೆಂಗಳೂರು: ಕರ್ನಾಟಕ ವಿಧಾನ ಮಂಡಲದ ವ್ಯವಸ್ಥೆಗೆ ಒಂದು ವಿಶಿಷ್ಟ ಇತಿಹಾಸವಿದ್ದು, ಇತ್ತೀಚಿನ ಬೆಳವಣಿಗೆಗಳಿಂದ ಸಂಸದೀಯ ವ್ಯವಸ್ಥೆಯ ಮೌಲ್ಯ ಕುಸಿಯುತ್ತಿದೆ. ಈ ಬಗ್ಗೆ ಚರ್ಚಿಸಲು ಸಮಾಲೋಚನಾ ಸಭೆ ಆಯೋಜಿಸಲಾಗಿದೆ. ಈ ಬಗ್ಗೆ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಮಾತನಾಡಿ, ಇಡೀ ದೇಶಕ್ಕೆ ಮಾದರಿ ವಿಧಾನ ಮಂಡಲವನ್ನು ನೀಡಿದ ರಾಜ್ಯ ಕರ್ನಾಟಕ. ಡಿ.15ರಂದು ವಿಧಾನ ಪರಿಷತ್ತಿನಲ್ಲಿ ನಡೆದ ಘಟನೆ ಸಂಸದೀಯ ವ್ಯವಸ್ಥೆಯನ್ನೇ ತಲ್ಲಣಗೊಳಿಸುವ ಘಟನೆಯಾಗಿದೆ. ಈ ಸಂಬಂಧ ಮುಂದಿನ ದಿನಗಳಲ್ಲಿ ಅಧಿವೇಶನಕ್ಕೂ ಮುನ್ನ ಸಾಮಾಜಿಕ ಚಿಂತಕರು, ತಜ್ಞರು, ಹಿರಿಯರು ಹಾಗೂ ಮಾಧ್ಯಮ ಪ್ರತಿನಿಧಿಗಳನ್ನು ಒಳಗೊಂಡಂತೆ ಸಮಾಲೋಚನಾ ಸಭೆಯನ್ನು ಕರೆದು ಚರ್ಚಿಸುವುದಾಗಿ ತಿಳಿಸಿದರು.